ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯಲ್ಲಿರುವ ನೌಕರುಗಳ (ಅಧಿಕಾರಿಗಳು ಮತ್ತು ಅಧಿಕಾರೇತರುಗಳು) ಸಂಖ್ಯೆ ಎಷ್ಟು (ವಿವರ ನೀಡುವುದು)?

ಆ) ಖಾಲಿ ಇರುವ ಜಾಗಕ್ಕೆ ಯಾವಾಗ ನೇಮಕ ಮಾಡಲಾಗುವುದು?

ಶ್ರೀ ಬಿ. ಮುನಿಯಪ್ಪ ಮುದ್ದಪ್ಪ (ಮುಜರಾಯಿ ಸಚಿವರು) :

ಅ)	ಅಧಿಕಾರಿಗಳು	71
	ನೌಕರರು	307
	ಒಟ್ಟು	**378**

ಆ) ಖಾಲಿ ಇರುವ ಪದೋನ್ನತಿ ಹುದ್ದೆಗಳನ್ನು ಪದೋನ್ನತಿಯಿಂದ ಹಾಗೂ ನೇರ ನೇಮಕಾತಿ ಬಗ್ಗೆ ಆಯ್ಕೆ ಪ್ರಾಧಿಕಾರದವರಿಗೆ ಪಟ್ಟಿ ಕಳುಹಿಸಿದ್ದು ಅವರಿಂದ ಆಯ್ಕೆ ಪಟ್ಟಿ ಬಂದನಂತರ ಭರ್ತಿ ಮಾಡಲಾಗುವುದು.

ಸಹಕಾರ ಸಂಘಗಳ ಕಾಯಿದೆ ತಿದ್ದುಪಡಿ ಕುರಿತು

3026 - ಶ್ರೀ ಜಿ. ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಹಕಾರ ಸಂಘಗಳ ಕಾಯ್ದೆ ತಿದ್ದುಪಡಿ ಮಾಡುವ ಉದ್ದೇಶ ಸರ್ಕಾರಕ್ಕಿದೆಯೆ?

ಆ) ಇದ್ದಲ್ಲಿ ಯಾವಾಗ ಕಾಯಿದೆಗೆ ತಿದ್ದುಪಡಿ ಮಾಡಲಾಗುವುದು?

ಇ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಎಸ್. ಎಸ್. ಪಾಟೀಲ್ (ಸಹಕಾರ ಸಚಿವರು) :

ಅ) ಇದೆ.

ಆ) ತಿದ್ದುಪಡಿ ವಿಧೇಯಕವನ್ನು ವಿಧಾನ ಸಭೆಯಲ್ಲಿ ದಿನಾಂಕ:25.8.97ರಂದು ಮಂಡಿಸಲಾಗಿದೆ.

ಇ) ಉದ್ಭವಿಸುವುದಿಲ್ಲ.

ಪುತ್ತೂರು ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣ ನಿರ್ಮಾಣ

3028 - ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) : ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುತ್ತೂರು ಕೃಷಿ ಉತ್ಪನ್ನ ಮಾರುಕಟ್ಟೆ ನಿರ್ಮಾಣಕ್ಕಾಗಿ ಈ ತನಕ ಮಾಡಿದ ಖರ್ಚು ಎಷ್ಟು